# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕಂದಾಯ ಇಲಾಖೆ, ಉತ್ತರ ಕನ್ನಡ ಜಿಲ್ಲೆ

ನಂ:ಕಂಶಾ/ಸಿಬ್ಬಂದಿ (2)/ವಿವ-194/2021-22 ದಿನಾಂಕ:07-04-2022.

ಉತ್ತರ ಕನ್ನಡ ಜಿಲ್ಲೆಯ ಕಂದಾಯ ಘಟಕದಲ್ಲಿ ಬರುವ ತಾಲೂಕು ಕಚೇರಿಗಳಲ್ಲಿ ಹಾಗೂ ಭೂಮಿ ಕೇಂದ್ರಗಳಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ನಾಗರಿಕ ಸೇವೆಗಳು (Revenue subordinate branch) (Cadre & Recruitment) (ತಿದ್ದುಪಡಿ) ನಿಯಮಗಳು 2009 ರನ್ವಯ ಹಾಗೂ ಸರಕಾರದ ಪತ್ರ ಸಂಖ್ಯೆ.ಕಂಇ/04/ಬಿಎಸ್‌ಸಿ/2011 ದಿನಾಂಕ: 25-02-2011 ರಲ್ಲಿ ನೀಡಿದ ನಿರ್ದೇಶನದಂತೆ ನೇರ ನೇಮಕಾತಿಯಿಂದ ಭರ್ತಿ ಮಾಡಿಕೊಳ್ಳಬೇಕಾಗಿದೆ.

ಇದರ ಹೊರತಾಗಿ ಸರ್ಕಾರದ ಅಸ.ಪತ್ರ ಸಂಖ್ಯೆ: ಆರ್‌ಡಿ33/ಡಿಎಸ್‌ಪಿ/2012 ದಿನಾಂಕ21-06-2012ರ ರಂತೆ ರಾಜ್ಯದ ಜಿಲ್ಲಾ ಕೇಂದ್ರದಲ್ಲಿರುವ ತಾಲೂಕ ಕಚೇರಿಗಳಲ್ಲಿ ಹಾಗೂ ಇತರೇ ತಾಲೂಕ ಕಚೇರಿಗಳಲ್ಲಿ ಹೊಸದಾಗಿ ಸೃಜಿಸಲಾದ, ಮುಂಬಡ್ತಿ, ಘಟಕೀಯ ವರ್ಗಾವಣೆ, ವಯೋನಿವೃತ್ತಿಯಿಂದ ತೆರವಾದ ಗ್ರಾಮ ಲೆಕ್ಕಿಗ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ.

**1) ಹುದ್ದೆಗಳ ವಿವರ ಮತ್ತು ವೇತನ ಶ್ರೇಣಿ:**

**ಎ. ಹುದ್ದೆ ಹಾಗೂ ಸಂಖ್ಯೆ:** ಗ್ರಾಮ ಲೆಕ್ಕಿಗರ ಹುದ್ದೆಗಳು ಒಟ್ಟು – 102

**ಬಿ. ವೇತನ ಶ್ರೇಣಿ:** 21400-500-22400-550-24600-600-27000-650-29600-750-32600-850-36000-950-39800-1100-42000

## ಗ್ರಾಮ ಲೆಕ್ಕಿಗರ ಖಾಲಿ ಇರುವ ಹುದ್ದೆಗಳ ವಿವರಗಳು

**2) ಹುದ್ದೆಗಳ ವರ್ಗೀಕರಣ:**

**2017-18 ನೇ ಸಾಲಿನ ನೇರ ನೇಮಕಾತಿಯಿಂದ ಭರ್ತಿಯಾಗದೇ ಉಳಿದ ಗ್ರಾಮ ಲೆಕ್ಕಿಗ ಹುದ್ದೆಗಳ ವಿವರ**

| ಕ್ರ. ಸಂ | ವರ್ಗೀಕರಣದ ವಿವರ | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗ ವಿಕಲರು | ಮಾಜಿ ಸೈನಿಕರು | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | ಪರಿಶಿಷ್ಟ ಜಾತಿ | - | - | - | - | - | - | - | - |
| 2 | ಪರಿಶಿಷ್ಟ ಪಂಗಡ | - | - | - | - | - | - | - | - |
| 3 | ಪ್ರವರ್ಗ-1 | - | - | - | - | - | - | - | - |
| 4 | ಪ್ರವರ್ಗ-2ಎ | - | - | - | - | - | - | - | - |
| 5 | ಪ್ರವರ್ಗ-2ಬಿ | - | - | - | - | - | - | - | - |
| 6 | ಪ್ರವರ್ಗ-3ಎ | - | - | - | - | - | - | - | - |
| 7 | ಪ್ರವರ್ಗ-3ಬಿ | - | 1 | - | - | - | - | - | 1 |
| 8 | ಸಾಮಾನ್ಯ ಅರ್ಹತೆ | - | - | 1 | - | - | - | - | 1 |
| | **ಅಂತೂ** | 0 | 1 | 1 | 0 | 0 | 0 | 0 | 2 |

## 2018-19 ನೇ ಸಾಲಿನ ನೇರ ನೇಮಕಾತಿಯಿಂದ ಭರ್ತಿಯಾಗದೇ ಉಳಿದ ಗ್ರಾಮ ಲೆಕ್ಕಿಗ ಹುದ್ದೆಗಳ ವಿವರ

| ಕ್ರ. ಸಂ | ವರ್ಗೀಕರಣದ ವಿವರ | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗ ವಿಕಲರು | ಮಾಜಿ ಸೈನಿಕರು | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | ಪರಿಶಿಷ್ಟ ಜಾತಿ | – | 1 | 1 | – | – | – | – | 2 |
| 2 | ಪರಿಶಿಷ್ಟ ಪಂಗಡ | – | – | – | – | – | – | – | – |
| 3 | ಪ್ರವರ್ಗ-1 | – | – | – | – | – | – | – | – |
| 4 | ಪ್ರವರ್ಗ-2ಎ | 1 | 1 | 1 | – | – | – | – | 3 |
| 5 | ಪ್ರವರ್ಗ-2ಬಿ | 1 | – | – | – | – | – | – | 1 |
| 6 | ಪ್ರವರ್ಗ-3ಎ | – | – | – | – | – | – | – | – |
| 7 | ಪ್ರವರ್ಗ-3ಬಿ | – | – | – | – | – | – | – | – |
| 8 | ಸಾಮಾನ್ಯ ಅರ್ಹತೆ | – | 1 | 4 | 1(ಶ್ರವಣದೋಷ) | 1 | 1 | – | 8 |
| | ಅಂತೂ | 2 | 3 | 6 | 1 | 1 | 1 | 0 | 14 |

## 2021-22ನೇ ಸಾಲಿನ ಖಾಲಿ ಇರುವ ಹುದ್ದೆಗಳು ರೋಷ್ಟರ 30 ರಿಂದ 100 ಮತ್ತು 1 ರಿಂದ15( ವೃತ್ತ 4)

| ಕ್ರ. ಸಂ | ವರ್ಗೀಕರಣದ ವಿವರ | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗ ವಿಕಲರು | ತೃತೀಯ ಲಿಂಗ | ಮಾಜಿ ಸೈನಿಕರು | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|---|
| 1 | ಪರಿಶಿಷ್ಟ ಜಾತಿ | 3 | 4 | 3 | 1 (ಶ್ರವಣದೋಷ) | 0 | 1 | 0 | 1 | 13 |
| 2 | ಪರಿಶಿಷ್ಟ ಪಂಗಡ | 1 | 1 | 1 | 0 | 0 | 0 | 0 | 0 | 3 |
| 3 | ಪ್ರವರ್ಗ-1 | 2 | 1 | 0 | 0 | 0 | 1 | 0 | 0 | 4 |
| 4 | ಪ್ರವರ್ಗ-2ಎ | 3 | 4 | 2 | 1 (ಶ್ರವಣದೋಷ) | 0 | 1 | 0 | 1 | 12 |
| 5 | ಪ್ರವರ್ಗ-2ಬಿ | 1 | 1 | 0 | 0 | 0 | 0 | 0 | 0 | 2 |
| 6 | ಪ್ರವರ್ಗ-3ಎ | 1 | 1 | 0 | 0 | 0 | 1 | 0 | 0 | 3 |
| 7 | ಪ್ರವರ್ಗ-3ಬಿ | 1 | 2 | 1 | 0 | 0 | 1 | 1 | 0 | 6 |
| 8 | ಸಾಮಾನ್ಯ ಅರ್ಹತೆ | 9 | 13 | 11 | 2 (ಚಲನವಲನ ವೈಕಲ್ಯ) (ಕುಷ್ಟರೋಗ ಗುಣಮುಖ/ಬುದ್ಧಿಮಾಂದ್ಯತೆ/ಮಾನಸಿಕ ಅಸ್ವಸ್ಥತೆ) | 1 | 4 | 1 | 2 | 43 |
| | ಅಂತೂ | 21 | 27 | 18 | 4 | 1 | 9 | 2 | 4 | 86 |

| 2017-18 ನೇ ಸಾಲಿನ ನೇರ ನೇಮಕಾತಿಯಿಂದ ಭರ್ತಿಯಾಗದೇ ಖಾಲಿ ಇರುವ ಹುದ್ದೆ | 2018-19 ನೇ ಸಾಲಿನ ನೇರ ನೇಮಕಾತಿಯಿಂದ ಭರ್ತಿಯಾಗದೇ ಖಾಲಿ ಇರುವ ಹುದ್ದೆ | 2021-22ನೇ ಸಾಲಿನ ಖಾಲಿ ಇರುವ ಹುದ್ದೆಗಳು | ಒಟ್ಟೂ |
|---|---|---|---|
| 02 | 14 | 86 | 102 |

**3) ಶೈಕ್ಷಣಿಕ ವಿದ್ಯಾರ್ಹತೆ:** ಕರ್ನಾಟಕ ಪಿ.ಯು. ಬೋರ್ಡ ನಡೆಸುವ ಪಿಯುಸಿ ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.ದೂರ ಶಿಕ್ಷಣದ ಮೂಲಕ ಪಿಯುಸಿ ಅಥವಾ ಸಮಾನಂತರ ವಿದ್ಯಾರ್ಹತೆ ಹೊಂದಿರುವವರು ಅರ್ಹರಿರುವುದಿಲ್ಲ.

**4) ವಯೋಮಿತಿ:** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಗಿನಂತೆ ವಯೋಮಿತಿ ಹೊಂದಿರುತಕ್ಕದ್ದು

| | ಕನಿಷ್ಠ | ಗರಿಷ್ಠ |
|---|---|---|
| ಪ.ಜಾ/ ಪ.ಪಂ/ ಪ್ರ-1 | 18 ವರ್ಷ | 40 ವರ್ಷ |
| 2ಎ, 2ಬಿ, 3ಎ, 3ಬಿ | 18 ವರ್ಷ | 38 ವರ್ಷ |
| ಸಾಮಾನ್ಯ ವರ್ಗ | 18 ವರ್ಷ | 35 ವರ್ಷ |

1977 ರ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದ್ದಲ್ಲಿ ಪರಿಶೀಲಿಸಲಾಗುವುದು. ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿಸಿ) ಯಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ. ಕರ್ನಾಟಕ ಸರಕಾರಿ ಸೇವಾ (ಸಾಮಾನ್ಯ ನೇಮಕಾತಿ) 1977 ರ ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ನಿಯಮ 6 ರಂತೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

ಎ) ಸರಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು ಮತ್ತು ಸರಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂತಹ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದಷ್ಟು ಅಥವಾ (ಹತ್ತು) ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಬಿ) ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರ್ರದ ಸಶಸ್ತ್ರ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

ಸಿ) ಪೂರ್ಣಾವಧಿ ಕೆಡೆಟ್ ಇನ್‌ಸ್ಟ್ರಕ್ಟರ ಆಗಿ ಸೇವೆ ಸಲ್ಲಿಸಿದ ತರುವಾಯ ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ ಹಾಗೆ ಕೆಡೆಟ್ ಇನ್‌ಸ್ಟ್ರಕ್ಟರ ಆಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು.

ಡಿ) ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್ಸ್‌ಪೆಕ್ಟರ್ ಆಗಿರುವ ಅಥವಾ ಆಗಿದ್ದಂತ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥಹ ಗ್ರಾಮ ಸಮೂಹ ಇನ್ಸ್‌ಪೆಕ್ಟರ್ ಆಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು.

ಇ) ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

ಎಫ್) ಈ ರಾಜ್ಯದಲ್ಲಿರುವ ಭಾರತ ಸರಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಗಳನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥಹ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಜಿ) ಅಭ್ಯರ್ಥಿ ವಿಧವೆಯಾಗಿರುವಾಗ ಹತ್ತು ವರ್ಷಗಳು.

ಎಚ್) ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

**5) ಆನ್ ಲೈನ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:**

**6) ಆನ್ ಲೈನ್ (On line) ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು:**

ಅರ್ಜಿಗಳನ್ನು ಆನ್ ಲೈನ್ (On line) ಎಲೆಕ್ಟ್ರಾನಿಕ್ ಮಾರ್ಗ ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಆನ್ ಲೈನ್‌ಲ್ಲಿ ಅರ್ಜಿಯನ್ನು ಸಲ್ಲಿಸಿದವರು ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಭ್ಯಥಿಯು http://uttarakannada.nic.in ನ **'ಆನ್‌ಲೈನ್ ಮುಖಾಂತರ ಗ್ರಾಮ ಲೆಕ್ಕಿಗರ ನೇರ ನೇಮಕಾತಿ ಅರ್ಜಿ ತುಂಬುವುದು'** ರ ಮೇಲೆ ಕ್ಲಿಕ್ ಮಾಡಿದಾಗ ತೆರೆದ ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು ಅಭ್ಯರ್ಥಿಯು Submit button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್ ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಯು ಸ್ವೀಕೃತಿ ಪತ್ರ ವನ್ನು ತೆಗೆದುಕೊಳ್ಳತಕ್ಕದ್ದು.

ನಂತರ ಅಭ್ಯರ್ಥಿಯು ಶುಲ್ಕವನ್ನು ಆನ್ ಲೈನ್(Pay Online) ಮೂಲಕ ಪಾತಿಸಬಹುದಾಗಿದೆ. ಶುಲ್ಕವನ್ನು ಆನ್ ಲೈನ್ ಮೂಲಕ ಪಾವತಿ ಮಾಡಲಾಗದಿದ್ದಲ್ಲಿ ಅಭ್ಯರ್ಥಿ ಆನ್‌ಲೈನ್‌ನಿಂದಲೆ ಚಲನ ಪ್ರತಿಯನ್ನು ಮುದ್ರಿಸಿ ನಗದನ್ನು ಯಾವುದೇ ಎಸ್.ಬಿ.ಐ ಶಾಖೆಯಲ್ಲಿ ಬ್ಯಾಂಕ ಶುಲ್ಕದೊಂದಿಗೆ ಪಾವತಿಸಬಹುದು. ಬ್ಯಾಂಕ್ ಗೆ ಶುಲ್ಕ ಪಾವತಿಸಿದ ಬಗ್ಗೆ ಚಲನ್ ಪ್ರತಿಯನ್ನು Upload Challan ಆಯ್ಕೆಯ ಮೂಲಕ ಅಪಲೋಡ್ ಮಾಡಬೇಕು ಶುಲ್ಕ ಪಾವತಿಸಲು ಕೊನೆಯ ದಿನಾಂಕ:10-05-2022 ಆಗಿರುತ್ತದೆ. ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿ ಅರ್ಜಿ ಶುಲ್ಕ ಆನ್ ಲೈನ್/ಆಪ್ ಲೈನ್ (ಬ್ಯಾಂಕ್ ಚಲನ್) ಮೂಲಕ ಪಾವತಿ ಮಾಡಿದ ನಂತರದ ದಿನ (Next Day) ಅರ್ಜಿ ಸ್ಥಿತಿ ಪರೀಕ್ಷಿಸಿಕೊಳ್ಳಬಹುದಾಗಿದೆ. ಈ ರೀತಿ ಹಣ ಪಾವತಿಸುವ ಕುರಿತು ಹೆಚ್ಚಿನ ಮಾಹಿತಿಗಾಗಿ ಪೋನ್ ನಂಬರ 9483511015 ಅಥವಾ 08382 229857 ಸಂಪರ್ಕಿಸಲು ಸೂಚಿಸಿದೆ.

ಅಭ್ಯರ್ಥಿಯು ಸ್ವೀಕೃತಿ ಪತ್ರ ಹಾಗೂ ಚಲನ ಪಾವತಿಸಿದ್ದಲ್ಲಿ ಚಲನ ಪ್ರತಿಯನ್ನು ಸಂದರ್ಶನದ ದಿನಾಂಕದವರೆಗೆ ಕಾಯ್ದಿರಿಸಿಕೊಳ್ಳಬೇಕು ಹಾಗೂ ಯಾವುದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಿಂದ ಈ ಬಗ್ಗೆ ಕೇಳಿದರೆ ಹಾಜರಪಡಿಸತಕ್ಕದ್ದು.

ಕಚೇರಿಯ ಅಧಿಕೃತ ವೆಬ್ ಸೈಟ್‌ಗಳಾದ http://uttarakannada.nic.in ರಲ್ಲಿ ನೀಡಿರುವ ಈ ಮಾಹಿತಿಯನ್ನು ಪರಿಶೀಲಿಸಬಹುದಾಗಿದೆ. ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ.08382-229857 ಅಥವಾ vakarwar@gmail.com ಇ-ಮೇಲ್ ಮೂಲಕ ಹೆಚ್ಚಿನ ಮಾಹಿತಿ ಬಯಸಬಹುದು.

**7) ಅಭ್ಯರ್ಥಿ ಬ್ಯಾಂಕ್‌ಗೆ ಪಾವತಿಸುವ ನಿಗದಿತ ಶುಲ್ಕದ ಬಗ್ಗೆ:**

1. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-1 ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ರೂ.100.00 ಮಾತ್ರ ( ಬ್ಯಾಂಕ ಶುಲ್ಕ ಹೊರತು ಪಡಿಸಿ)

2. ಇತರೆ ಅಭ್ಯರ್ಥಿಗಳಿಗೆ ರೂ.200.00 ಮಾತ್ರ. ( ಬ್ಯಾಂಕ ಶುಲ್ಕ ಹೊರತು ಪಡಿಸಿ)

**8) ಜಾತಿ ಮೀಸಲಾತಿ ಕೋರಬಯಸುವ:**

* ಪ.ಜಾ/ ಪ.ಪಂ ಅಭ್ಯರ್ಥಿಗಳು ನಮೂನೆ 'ಡಿ'
* ಪ್ರವರ್ಗ-1 ಅಭ್ಯರ್ಥಿಗಳು ನಮೂನೆ 'ಇ'

* ಪ್ರವರ್ಗ -2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ ಎಫ್ ಈ ಮೇಲೆ ನಿಗದಿಪಡಿಸಿದ ನಮೂನೆಯಲ್ಲಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ ರವರಿಂದ ಪ್ರಮಾಣ ಪತ್ರವನ್ನು ಪಡೆದು ಇದರ ದೃಢೀಕೃತ ನಕಲನ್ನು ಅರ್ಜಿಯೊಂದಿಗೆ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು. (ಪ್ರಮಾಣ ಪತ್ರವು ಅಧಿಸೂಚನೆ ಆದ ದಿನಾಂದಿಂದ ಐದು ವರ್ಷದ ಒಳಗಡೆ ಇರತಕ್ಕದ್ದು)

**9) ಗ್ರಾಮೀಣ ಅಭ್ಯರ್ಥಿ:**

1. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10 ನೇ ತರಗತಿಯ ವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು.
2. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1, ಪ್ರವರ್ಗ -2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ-2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.
3. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2 ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ 1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

**ಸೂಚನೆ:** ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

**10) ಅಂಗವಿಕಲ ಅಭ್ಯರ್ಥಿ:**

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 9 (1-ಎ) ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್-ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇ.5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರಕಾರದ ಆದೇಶ ಸಿಆಸುಇ/52/ಎಸ್‌ಆರ್‌ಆರ್/59 ದಿನಾಂಕ:29-11-2002 ರಂತೆ ಮೀಸಲಾತಿ ನೀಡಲಾಗುವುದು. ಸರಕಾರದ ಅಧಿಕೃತ ಜ್ಞಾಪನ ಸಂಖ್ಯೆ.ಸಿಆಸುಇ/128/ಸೆನೆನಿ/2005 ದಿನಾಂಕ:19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು. ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರ ಮತ್ತು ಅಂಗವಿಕಲತೆಯ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಅನುಮಾನ ಬಂದಲ್ಲಿ ಜಿಲ್ಲೆಯ ವೈದ್ಯಕೀಯ ಮಂಡಳಿ ಮುಂದೆ ಹಾಜರು ಪಡಿಸಲಾಗುವುದು. ಅವರು ನೀಡುವ ಅಭಿಪ್ರಾಯ/ಪ್ರಮಾಣ ಪತ್ರ ಅಂತಿಮವಾಗಿರುತ್ತದೆ. ಸದರಿ ಹುದ್ದೆಗೆ ಈ ಕೆಳಕಂಡ ಅಂಗವಿಕಲತೆ ಉಳ್ಳವರು ಮಾತ್ರ ಅರ್ಜಿ ಸಲ್ಲಿಸಬಹುದು.

1) ಶ್ರವಣದೋಷ ಉಳ್ಳವರು (Hearing impaired)
2) ದೈಹಿಕ ಅಂಗವಿಕಲತೆ ಉಳ್ಳವರು (Loco motor disability)
3) ಕುಷ್ಠ ರೋಗದಿಂದ ಗುಣಮುಖರಾದವರು (Leprosy cured)/ಮಾನಸಿಕ ಅಸ್ವಸ್ಥತೆ (Mentally ill)

**11) ಕನ್ನಡ ಮಾಧ್ಯಮ ಅಭ್ಯರ್ಥಿ:**

ಕನ್ನಡ ಮಾಧ್ಯಮ ಅಭ್ಯರ್ಥಿಗಳಿಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10 ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ

ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿ ದೃಢೀಕೃತ ಪ್ರತಿಯನ್ನು ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

**12) ಯೋಜನಾ ನಿರಾಶ್ರಿತ ಅಭ್ಯರ್ಥಿ:**

ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರು ನೀಡಿದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

**13) ಅರ್ಹತಾ ಷರತ್ತುಗಳು:**

ಎ) ಅರ್ಜಿದಾರನು ಭಾರತೀಯ ನಾಗರಿಕನಾಗಿರತಕ್ಕದ್ದು.

ಬಿ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

ಸಿ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅಭ್ಯರ್ಥಿ ಅನರ್ಹರೆಂದು ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರ ಕಾಯ್ದಿರಿಸಿಕೊಂಡಿದೆ.

ಡಿ) ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿ ವಯೋಮಿತಿಯೊಳಗಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸುವ ಅರ್ಹತೆಯನ್ನು ಹೊಂದಿರುತ್ತಾರೆ.

ಇ) ಸರಕಾರದ ಅಧಿಸೂಚನೆ ಕ್ರ.ಸಂ.ಸಿಆಸುಇ/118/ಸೇಅನೇ/2009 ದಿನಾಂಕ:28-06-2010 ರನ್ವಯ ಕನ್ನಡ ಭಾಷಾ ಪರೀಕ್ಷೆ ತೇರ್ಗಡೆಯಾಗಲು ವಿನಾಯತಿ ಪ್ರಮಾಣ ಪತ್ರ ಹಾಜರಪಡಿಸದ ಅಥವಾ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆಯಾದ ಹೊರತು ನೇಮಕಾತಿಗೆ ಅರ್ಹತೆ ಹೊಂದಿರುವುದಿಲ್ಲ.

ಎಫ್) ಕರ್ನಾಟಕ ನಾಗರಿಕ ಸೇವೆ (ಕಂಪ್ಯೂಟರ ಲಿಟರಸಿ ಟೆಸ್ಟ್) ನಿಯಮಗಳು 2012 ರ ನಿಯಮ 2 ರಲ್ಲಿ ನಿಗದಿಪಡಿಸಿರುವಂತೆ ಹುದ್ದೆಗೆ ಆಯ್ಕೆಗೊಂಡ ಅಭ್ಯರ್ಥಿಗಳು ಸರ್ಕಾರದವರು ನಡೆಸುವ ಅಥವಾ ಸರಕಾರದ ಅನುಮೋದಿತ ಏಜನ್ಸಿಯವರು ತೆಗೆದುಕೊಳ್ಳುವ ಕಂಪ್ಯೂಟರ್ ಲಿಟರಸಿ ಟೆಸ್ಟ್ (Computer Literacy Test) ನಲ್ಲಿ ಕನಿಷ್ಠ ಶೇ.75 ಕ್ಕಿಂತ ಕಡಿಮೆ ಇಲ್ಲದಷ್ಟು ಅಂಕ ಪಡೆದು ಪಾಸಾದ ಬಗ್ಗೆ ಪ್ರಮಾಣ ಪತ್ರವನ್ನು ಮೂರು ತಿಂಗಳ ಅವಧಿಯೊಳಗಾಗಿ ಹಾಜರಪಡಿಸತಕ್ಕದ್ದು.

**14) ಪ್ರಮುಖವಾದ ಸೂಚನೆಗಳು:**

ಅಭ್ಯರ್ಥಿಗಳು ಕೆಳಕಂಡ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

1) ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳು.

2) ಜನನ ಪ್ರಮಾಣ ಪತ್ರ ಅಥವಾ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ.
ಸೈನಿಕ ಸೇವೆಯಿಂದ ಬಿಡುಗಡೆಯಾದ/ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)

3) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ -2ಎ, 2ಬಿ, ಪ್ರವರ್ಗ-3ಎ, 3ಬಿ ಗಳ ಮೀಸಲಾತಿ ಪ್ರಮಾಣ ಪತ್ರಗಳು ನಿಗದಿತ ನಮೂನೆಯಲ್ಲಿ (ಮೀಸಲಾತಿ ಕೋರಿದ್ದಲ್ಲಿ)

4) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)

5) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

6) ಅಂಗವಿಕಲ ಮೀಸಲಾತಿ ಅಭ್ಯರ್ಥಿಯ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

7) ಯೋಜನಾ ನಿರಾಶ್ರಿತ ಅಭ್ಯರ್ಥಿಯ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

8) ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ

9) ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ (ಅಧ್ಯಕ್ಷರು ಜಾತಿ ಆದಾಯ ಪರಿಶೀಲನಾ ಸಮಿತಿ) ಇವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

10) ಅರ್ಜಿಯಲ್ಲಿ ಸಲ್ಲಿಸಿರುವ ಮೀಸಲಾತಿ ಕೋರಿರುವ/ ವಯೋಮಿತಿ ರಿಯಾಯತಿ ಕೋರಿರುವ ಅಗತ್ಯ ದಾಖಲೆಗಳನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗೆ ಸಂಬಂಧಿಸಿದ ಕಚೇರಿಯಿಂದ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡು ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸುವುದು.

11) ಈ ಅಧಿಸೂಚನೆಯನ್ನು ಸಂದರ್ಭಾನುಸಾರ ರದ್ದುಪಡಿಸುವ, ಮಾರ್ಪಡಿಸುವ ಅಥವಾ ಪರಿಷ್ಕರಿಸುವ ಅಧಿಕಾರವನ್ನು ಜಿಲ್ಲಾಧಿಕಾರಿ ಉತ್ತರ ಕನ್ನಡ ಕಾರವಾರ ರವರು ಹೊಂದಿರುತ್ತಾರೆ.

**15) ಸಾಮಾನ್ಯ ಸೂಚನೆಗಳು:**

1) ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಪಡೆದ CHALLAN ಹಾಗೂ Acknowledgement slip ಮಡಚುವುದಾಗಲೀ, ಹರಿಯುವುದಾಗಲೀ ಮಾಡದೇ ಹಾಳಾಗದಂತೆ ಎಚ್ಚರ ವಹಿಸತಕ್ಕದ್ದು.

2) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪತ್ರ (No Objection Certificate) ವನ್ನು ಪಡೆದು ಮೂಲ ದಾಖಲಾಗಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

3) ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿ ಉತ್ತರ ಕನ್ನಡ ಜಿಲ್ಲೆ ಕಾರವಾರ ಇವರು ಕಾಯ್ದಿರಿಸಿಕೊಂಡಿರುತ್ತಾರೆ.

4) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ. ಆಯ್ಕೆಯ ಸಂಬಂಧವಾಗಿ ಈ ಕಚೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದ ಇರುವುದಿಲ್ಲ.

***5) ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ನಿಯಮ 16 ಎ ಗೆ ತಿದ್ದುಪಡಿಯಂತೆ ಘಟಕೀಯ ವರ್ಗಾವಣೆ/ಅಂತರ್ ಜಿಲ್ಲಾ ವರ್ಗಾವಣೆಗೆ ಯಾವುದೇ ರೀತಿ ಅವಕಾಶವಿರುವುದಿಲ್ಲ. ಹಾಗೂ ಬೇರೆ ಜಿಲ್ಲೆಗಳಿಗೆ ಪ್ರತಿನಿಯೋಜನೆ ಹೊಂದಲು ಸಹ ಅವಕಾಶವಿರುವುದಿಲ್ಲ.***

**16) ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವರ

ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನು/ ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿಯನ್ನು ರದ್ದುಪಡಿಸಲಾಗುವುದು.

**17) ಉತ್ತರ ಕನ್ನಡ ಜಿಲ್ಲಾಧಿಕಾರಿಯವರ ಕಚೇರಿಯೊಂದಿಗೆ ಪತ್ರ ವ್ಯವಹಾರ:**

ಉತ್ತರ ಕನ್ನಡ ಜಿಲ್ಲಾಧಿಕಾರಿಯವರ ಕಚೇರಿಯು ಅಭ್ಯರ್ಥಿಯ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರಗಳನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿ ಮೂಲಕ ಉತ್ತರ ಕನ್ನಡ ಜಿಲ್ಲಾಧಿಕಾರಿಯವರ ಕಚೇರಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಪ್ರಾಧಿಕಾರವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಪ್ರಾಧಿಕಾರವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

**18) ಆಯ್ಕೆ ವಿಧಾನ:**

ಕರ್ನಾಟಕ ಜನರಲ್ ಸರ್ವಿಸ್ (Revenue subordinated branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಅಥವಾ ಸಿ.ಬಿ.ಎಸ್.ಇ. ಅಥವಾ ಐಸಿಎಸ್‌ಇ ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು.

| | | |
|---|---|---|
| 1. | ಅರ್ಜಿ ಕರೆಯಲು ನಿಗದಿ ಪಡಿಸಿದ ದಿನಾಂಕ | 11-04-2022 |
| 2. | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 10-05-2022 |

**ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು**
**ಗ್ರಾಮ ಲೆಕ್ಕಿಗರ ನೇರ ನೇಮಕಾತಿ ಪ್ರಾಧಿಕಾರಿ**
**ಉತ್ತರ ಕನ್ನಡ ಜಿಲ್ಲೆ ಕಾರವಾರ.**

**ಪ್ರತಿಯನ್ನು:**

1) ಮಹಾಲೇಖಪಾಲರು ಕರ್ನಾಟಕ ಬೆಂಗಳೂರು ಇವರ ಅವಗಾಹನೆಗೆ.
2) ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ ಸೇವೆಗಳು, ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
3) ಕಾರ್ಯದರ್ಶಿಗಳು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
4) ಪ್ರಾದೇಶಿಕ ಆಯುಕ್ತರು ಬೆಳಗಾವಿ ವಿಭಾಗ ಬೆಳಗಾವಿ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
5) ರಾಜ್ಯದ ಎಲ್ಲ ಜಿಲ್ಲಾಧಿಕಾರಿಯವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
6) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ಉತ್ತರ ಕನ್ನಡ ಕಾರವಾರ.
7) ಜಿಲ್ಲಾ ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆ ಉತ್ತರ ಕನ್ನಡ ಕಾರವಾರ.
8) ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉತ್ತರ ಕನ್ನಡ ಕಾರವಾರ.
9) ಜಿಲ್ಲೆಯ ಎಲ್ಲಾ ಉಪ ವಿಭಾಗಾಧಿಕಾರಿಗಳು ಇವರಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.

10) ಜಿಲ್ಲೆಯ ಎಲ್ಲಾ ತಹಶೀಲ್ದಾರರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ

11) ಹೆಚ್ಚಿನ ಪ್ರತಿಗಳು.